# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 495 |
| 2 | ಸದಸ್ಯರ ಹೆಸರು | : | ಡಾ: ಉಮಾಶ್ರೀ<br>(ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 20-08-2026 |
| 4 | ಉತ್ತರಿಸುವವರು | : | ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಓಕಳೀಪುರಂನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ರಾಜೀವ್‌ಗಾಂಧಿ ಸಿಗ್ನಲ್ ಮುಕ್ತ ಅಷ್ಟಪಥ ಕಾಮಗಾರಿಯು ಎಂದು ಪ್ರಾರಂಭವಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ; | ಬೆಂಗಳೂರು ನಗರದ ಓಕಳೀಪುರಂನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ರಾಜೀವ್‌ಗಾಂಧಿ ಸಿಗ್ನಲ್ ಮುಕ್ತ ಅಷ್ಟಪಥ ಕಾಮಗಾರಿಗೆ ದಿನಾಂಕ: 10.12.2012 ರಂದು ಗುತ್ತಿಗೆದಾರರಾದ ಮೆ\|\| ಸಿಂಪ್ಲೆಕ್ಸ್ ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ ರವರಿಗೆ ಕಾರ್ಯಾದೇಶವನ್ನು ನೀಡಿದ್ದು, ದಿನಾಂಕ:01.07.2015 ರಂದು ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ. ಪ್ರಸ್ತುತ ಶೇ. 95 ರಷ್ಟು ಕಾಮಗಾರಿಯು ಪೂರ್ಣಗೊಂಡಿರುತ್ತದೆ. |
| ಆ) | ಈ ಕಾಮಗಾರಿಯನ್ನು ಎಷ್ಟು ಗುತ್ತಿಗೆದಾರರಿಗೆ ನೀಡಲಾಗಿದೆ; ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ ಎಷ್ಟು; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ; | ಕಾಮಗಾರಿಯನ್ನು ಪೂರ್ಣಗೊಳಿಸಲು 18 ತಿಂಗಳುಗಳ ಕಾಲಾವಧಿಯನ್ನು ನೀಡಲಾಗಿರುತ್ತದೆ. ಆದರೆ, ಕಾಮಗಾರಿಗೆ ಅವಶ್ಯವಿದ್ದ ಭೂಸ್ವಾಧೀನ ಪ್ರಕ್ರಿಯೆ, ಉಪಯುಕ್ತತೆಗಳ ಸ್ಥಳಾಂತರಿಸುವಿಕೆ / ಹೊಸದಾಗಿ ಅಳವಡಿಸುವಿಕೆ ಮತ್ತು ರೈಲ್ವೆ ಮಾರ್ಗದ ಕೆಳಭಾಗದಲ್ಲಿನ ಕೆಳಸೇತುವೆಗಳನ್ನು ರೈಲ್ವೆ ಇಲಾಖೆಯ ವತಿಯಿಂದಲೇ ನಿರ್ಮಿಸಬೇಕಾದುದರಿಂದ ಗುತ್ತಿಗೆದಾರರು ನಿಗದಿತ ಕಾಲಾವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. |
| ಇ) | ಸರ್ಕಾರ ನೀಡಿರುವ ಸಮಯಕ್ಕೆ ಸರಿಯಾಗಿ ಕಾಮಗಾರಿ ಪೂರೈಸದಿದ್ದಲ್ಲಿ, ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ; | ಗುತ್ತಿಗೆದಾರರಿಗೆ ಕಾಮಗಾರಿಯನ್ನು ವಿಳಂಬವಾಗಿ ನಿರ್ವಹಿಸುತ್ತಿರುವ ಹಿನ್ನೆಲೆಯಲ್ಲಿ, ಈವರೆಗೂ ರೂ.56,63,972.00 ಗಳ ಮೊತ್ತದ ದಂಡವನ್ನು ವಿಧಿಸಲಾಗಿರುತ್ತದೆ. |
| ಈ) | ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿಗೆ ಟೆಂಡರ್‌ಗೆ ಅನುಮತಿ ನೀಡಲಾಗಿದೆ; ತದನಂತರ ಹೆಚ್ಚುವರಿಯಾಗಿ ಅನುದಾನವನ್ನು ನೀಡಲಾಗಿದ್ದಲ್ಲಿ, ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ನಅಇ 391 ಎಂಎನ್‌ವೈ 2012, ದಿನಾಂಕ: 26.09.2012 ರನ್ವಯ ರೂ.102.83 ಕೋಟಿಗಳ ಮೊತ್ತಕ್ಕೆ ಟೆಂಡರ್ ಅನುಮತಿ ನೀಡಲಾಗಿದ್ದು, ತದನಂತರ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20.09.2019 ರ ಅನುಬಂಧ-4ರ ಕ್ರಮ ಸಂಖ್ಯೆ – 16 ರಲ್ಲಿ ರೂ.10.00 ಕೋಟಿಗಳ ಹೆಚ್ಚುವರಿ ಅನುದಾನವನ್ನು ಉಪಯುಕ್ತತೆಗಳ ಸ್ಥಳಾಂತರಿಸುವಿಕೆ, ಹೆಚ್ಚುವರಿ ಭೂಸ್ವಾಧೀನ ಪ್ರಕ್ರಿಯೆಗಾಗಿ ಮತ್ತು ಕಾಮಗಾರಿಯಲ್ಲಿ ಉಂಟಾಗುವ ರೈಲ್ವೆ ಇಲಾಖೆಯ ಹೆಚ್ಚುವರಿ ಕಾಮಗಾರಿಗಳ ಮೊತ್ತವನ್ನು ಭರಿಸಲು ಒದಗಿಸಲಾಗಿರುತ್ತದೆ. |

| | | |
|---|---|---|
| ಉ) | ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ, ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ; | ಈ ಕಾಮಗಾರಿಯು ಪಾಲಿಕೆಯ ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆಯ ನಂತರವಷ್ಟೇ ಕಾರ್ಯರೂಪಕ್ಕೆ ತಂದಿದ್ದು, ವೈಜ್ಞಾನಿಕವಾಗಿಯೇ ನಿರ್ಮಿಸಲಾಗುತ್ತಿದೆ.<br><br>ಸದರಿ ಯೋಜನೆಯಲ್ಲಿ ರೈಲ್ವೆ ಮಾರ್ಗದ ಕೆಳಭಾಗದಲ್ಲಿನ ಕೆಳಸೇತುವೆ ನಿರ್ಮಾಣ ಕಾಮಗಾರಿಯನ್ನು ರೈಲ್ವೆ ಇಲಾಖೆಯ ವತಿಯಿಂದಲೇ ನಿರ್ಮಿಸಬೇಕಾಗಿರುತ್ತದೆ. ಬೆಂಗಳೂರು-ತುಮಕೂರು ರೈಲ್ವೆ ಮಾರ್ಗದ ಕೆಳಭಾಗದಲ್ಲಿ ಈಗಾಗಲೇ ಒಟ್ಟು 6 (ಆರು) ಕೆಳಸೇತುವೆಗಳನ್ನು ನಿರ್ಮಿಸಲಾಗಿದ್ದು, ಪಾಲಿಕೆಯ ವತಿಯಿಂದ ಅಪ್ರೋಚ್ ರಸ್ತೆ ನಿರ್ಮಿಸಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿರುತ್ತದೆ.<br><br>ಪ್ರಸ್ತುತ, ಬೆಂಗಳೂರು-ಚೆನ್ನೈ ರೈಲ್ವೆ ಮಾರ್ಗದ ಕೆಳಭಾಗದಲ್ಲಿ ಒಟ್ಟು 4 (ನಾಲ್ಕು) ಕೆಳಸೇತುವೆಗಳಲ್ಲಿ 2 (ಎರಡು) ಕೆಳಸೇತುವೆಗಳನ್ನು ನಿರ್ಮಿಸಲಾಗಿದ್ದು, ಪಾಲಿಕೆಯ ವತಿಯಿಂದ ಅಪ್ರೋಚ್ ರಸ್ತೆ ನಿರ್ಮಿಸಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿರುತ್ತದೆ.<br><br>ಉಳಿದ 2 (ಎರಡು) ಕೆಳಸೇತುವೆಗಳ ಕಾಮಗಾರಿಗಳು ಇತ್ತೀಚೆಗೆ ಪೂರ್ಣಗೊಂಡಿದ್ದು, ಬೆಂಗಳೂರು ಸಿಟಿ ರೈಲ್ವೆ ನಿಲ್ದಾಣದ ಅಭಿವೃದ್ಧಿಯ ಅಂಗವಾಗಿ ಹೆಚ್ಚುವರಿ ರೈಲ್ವೆ ಮಾರ್ಗಗಳನ್ನು ಅಳವಡಿಸುವ ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ ಈವರೆಗೂ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ.<br><br>ಪ್ರಸ್ತುತ ಪೂರ್ಣಗೊಂಡಿರುವ ಕೆಳಸೇತುವೆಗಳಿಗೆ ಪಾಲಿಕೆಯ ವತಿಯಿಂದ ಅಪ್ರೋಚ್ ರಸ್ತೆ ನಿರ್ಮಾಣ ಕಾಮಗಾರಿಗಳನ್ನು 15.07.2026 ರಿಂದ ಕೈಗೆತ್ತಿಕೊಳ್ಳಲಾಗಿರುತ್ತದೆ ಹಾಗೂ ಇತರೆ ಬಾಕಿ ಕಾಮಗಾರಿಗಳು ಸಹ ಪ್ರಗತಿಯಲ್ಲಿದ್ದು, ಎಲ್ಲಾ ಕಾಮಗಾರಿಗಳು ಪೂರ್ಣಗೊಂಡ ನಂತರ ಟ್ರಾಫಿಕ್ ಜಾಮ್ ಸಮಸ್ಯೆಯು ಸಹ ನಿವಾರಣೆಯಾಗುತ್ತದೆ.<br><br>ಮಳೆ ನೀರಿನಿಂದಾಗಿ ವಾಹನ ಸವಾರರಿಗೆ ಉಂಟಾಗುತ್ತಿರುವ ಅಡಚಣೆಯನ್ನು ನಿವಾರಿಸಲು ಬೆಂಗಳೂರು-ಚೆನ್ನೈ ರೈಲ್ವೆ ಮಾರ್ಗದ ಕೆಳಭಾಗದಲ್ಲಿ 1200 ಮಿ.ಮೀ. ವ್ಯಾಸದ ಕೊಳವೆಗಳನ್ನು ಅಳವಡಿಸಿ ಬೃಹತ್ ನೀರುಗಾಲುವೆಗೆ ಸಂಪರ್ಕಿಸುವ ಕಾಮಗಾರಿಯು ಸಹ ಪ್ರಗತಿಯಲ್ಲಿರುತ್ತದೆ. |
| ಊ) | ಸದರಿ ಕಾಮಗಾರಿಯನ್ನು ಇದುವರೆಗೂ ಪೂರ್ಣಗೊಳಿಸದಿರಲು ಕಾರಣಗಳೇನು; ವಾಹನ ಸವಾರರಿಗೆ ಈ ರಸ್ತೆಯಲ್ಲಿ ಸಂಚರಿಸುವುದು ತುಂಬಾ ಕಷ್ಟವಾಗಿರುವುದನ್ನು ಅಧಿಕಾರಿಗಳು ಗಮನಿಸಿದ್ದಾರೆಯೇ; ಹಾಗಿದ್ದಲ್ಲಿ, ಸದಾಕಾಲ ಈ ರಸ್ತೆ ಟ್ರಾಫಿಕ್ ಜಾಮ್‌ನಿಂದ ಕೂಡಿರಲು ಕಾರಣಗಳೇನು. | |

**ನಅಇ 595 ಎಂಎನ್‌ವೈ 2026 (ಇ)**

**(ಕೃಷ್ಣ ಬೈರೇಗೌಡ)**
ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರು